ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎಸ್‌ಪ್ರ 2018, ದಿನಾಂಕ: 20.09.2019ರ "ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆ"ಯ ಅಡಿಯಲ್ಲಿ ಅನುಮೋದನೆ ನೀಡಿರುವ ರೂ.2.00 ಕೋಟಿಗಳಿಗಿಂತ ಕಡಿಮೆ ಮೊತ್ತದ ಮತ್ತು ತುರ್ತು ಕಾಮಗಾರಿಗಳೆಂದು ಬಿ.ಬಿ.ಎಂ.ಪಿ.ಯಿಂದ ನಿಯಮಾನುಸಾರ ನಿರ್ಧರಿಸಿ ಮೆ॥ ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ಪಟ್ಟಿಸುವ ಕಾಮಗಾರಿಗಳಿಗೆ ಸೀಮಿತವಾಗಿ ಕಾಮಗಾರಿಗಳ ಅಂದಾಜುಪಟ್ಟಿಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ಸರ್ಕಾರದ ಅಧಿಕಾರವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಿಗೆ ಪ್ರತ್ಯಾಯೋಜಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎಸ್‌ಪ್ರ 2018, ದಿನಾಂಕ: 20.09.2019.

2. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಬಿ.ಬಿ.ಎಂ.ಪಿ./ಜಿಆರ್/3486/2019-20, ದಿನಾಂಕ: 11.10.2019.

* * * * *

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ: 20.09.2019ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ ಸರ್ಕಾರದ ಆದೇಶ ಸಂಖ್ಯೆ: ಬೆಂಗಳೂರು ಆದೇಶ ಸಂಖ್ಯೆ: ನಅಇ 375 ಎಂಎಸ್‌ಪ್ರ 2018, ದಿನಾಂಕ: 01.02.2019 ರಂತೆ ಅನುಮೋದಿಸಿದ್ದ "ಮುಖ್ಯಮಂತ್ರಿಗಳ ನವ ಬೆಂಗಳೂರು ಯೋಜನೆಯನ್ನು ರದ್ದುಪಡಿಸಿ, ಪರ್ಯಾಯವಾಗಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯ ಅಡಿಯಲ್ಲಿ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆಯನ್ನು ನೀಡಲಾಗಿರುತ್ತದೆ. ಸದರಿ ಆದೇಶದಲ್ಲಿ ತುರ್ತು ಸಂದರ್ಭಗಳಲ್ಲಿ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಆಇ 344 ವೆಚ್ಚ-12/2018 ರಂತೆ ನಿರ್ದಿಷ್ಟಪಡಿಸಿದ ಅನುಮೋದನೆ ನೀಡಲಾಗಿರುತ್ತದೆ.

2. ಮೇಲೆ (2) ರಲ್ಲಿ ಓದಲಾದ ದಿನಾಂಕ: 11.10.2019ರ ಪತ್ರದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿ ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎಸ್‌ಪ್ರ 2018, ದಿನಾಂಕ: 01.02.2019 ರಂತೆ ಅನುಮೋದಿಸಿದ್ದ "ಮುಖ್ಯಮಂತ್ರಿಗಳ ನವ ಬೆಂಗಳೂರು ಯೋಜನೆಯನ್ನು ರದ್ದುಪಡಿಸಿ, ಪರ್ಯಾಯವಾಗಿ ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆಯ ಅಡಿಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎಸ್‌ಪ್ರ 2018, ದಿನಾಂಕ: 20.09.2019 ರಲ್ಲಿ ಸರ್ಕಾರದ ಅನುಮೋದನೆ ನೀಡಿರುತ್ತದೆ. ಈ ಕ್ರಿಯಾಯೋಜನೆಯಲ್ಲಿ ಕೆ.ಆರ್.ಪುರ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಅನುಬಂಧ-2, 6 ಮತ್ತು 7 ರಂತೆ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಅನುಮೋದನೆ

---2

Scanned by CamScanner

ದೊರತಿದ್ದು, ಚಾಲ್ತಿ ಸಂಖ್ಯೆಯನ್ನು ಪಡೆಯಲಾಗಿರುತ್ತದೆ. ಪ್ರಸ್ತಾವನೆಯಲ್ಲಿನ ಕಾಮಗಾರಿಗಳನ್ನು ತುರ್ತಾಗಿ ಕೈಗೆತ್ತಿಕೊಳ್ಳಬೇಕಾಗಿರುವುದರಿಂದ ಪ್ರಸ್ತಾವಿತ ಕಾಮಗಾರಿಗಳು ರೂ.2.00 ಕೋಟಿ ಮೊತ್ತದ ಮಿತಿಯೊಳಗೆ ಇರುವುದರಿಂದ ಸದರಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಕಾಮಗಾರಿಗಳನ್ನು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಆಇ 344 ಪಸಾಇ/2018 ರಂತೆ, ಮೆ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ಮಂಜೂರು ಸರ್ಕಾರದ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

3. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಆ 250 ಎಂಎಸ್‌ಪಿ 2019, ಬೆಂಗಳೂರು, ದಿನಾಂಕ: 15.10.2019.

ಪ್ರಸ್ತಾವನೆಯಲ್ಲಿ ಏಪರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಆ 375 ಎಂಎಸ್‌ಪಿ 2018, ದಿನಾಂಕ: 20.09.2019 ರಲ್ಲಿ ತುರ್ತು ಸಂದರ್ಭಗಳಲ್ಲಿ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ:ಆಇ 344 ಪಸಾಇ-12/2018ರಂತೆ ಕ್ರಮ ಜರುಗಿಸಲು ಅನುಮೋದನೆ ನೀಡಲಾಗಿದ್ದು, ಅವು ತುರ್ತು ಕಾಮಗಾರಿಗಳೇ, ಅಲ್ಲವೇ ಎಂದು ನಿಯಮಾನುಸಾರ ನಿರ್ಧರಿಸುವುದು ಬಿ.ಬಿ.ಎಂ.ಪಿ.ಯ ಆಯುಕ್ತರ ವಿವೇಚನೆಗೆ ಬಿಟ್ಟಿದೆ. ಸರ್ಕಾರದ ಆದೇಶ ಸಂಖ್ಯೆ: ನಅಆ 375 ಎಂಎಸ್‌ಪಿ 2018, ದಿನಾಂಕ: 20.09.2019 ರಲ್ಲಿ ಅನುಮೋದಿಸಲಾಗಿರುವ ರೂ.2.00 ಕೋಟಿಗಳಿಂತ ಕಡಿಮೆ ಮೊತ್ತದ ಮತ್ತು ತುರ್ತು ಕಾಮಗಾರಿಗಳೆಂದು ಬಿ.ಬಿ.ಎಂ.ಪಿ.ಯಿಂದ ನಿಯಮಾನುಸಾರ ನಿರ್ಧರಿಸಿ, ಮೆ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ಮಂಜೂರಾದ ಕಾಮಗಾರಿಗಳಿಗೆ ಸಮಿತಿಯಾಗಿ ಕಾಮಗಾರಿಗಳ ಆದ್ಯತೆ ಮೇರೆಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ಸರ್ಕಾರದ ಅಧಿಕಾರವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಿಗೆ ಪ್ರತ್ಯಾರ್ಪಣೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
(ಲಕ್ಷ್ಮೀ ನಾರಾಯಣ ಭಟ್ಟ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಮ.ಸ.ಪ.ಸ.).

ಇವರಿಗೆ:

1. ಮಹಾಲೇಖಪಾಲರು (A&E)/(G&SSA)/(E&RSA), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
7. ಜಂಟಿ ನಿರ್ದೇಶಕರು (ಯೋಜನೆ), ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ರಾಜಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು/ಕಂಪ್ಯೂಟರೀಕರಣ/ಇಲಾಖಾ ಪೆಟ

Scanned by CamScanner